**ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು, ಕರ್ನಾಟಕ ಸರ್ಕಾರ ರವರ ನಡವಳಿಗಳು.**

**ವಿಷಯ** : ಮಾನ್ಯ ಮುಖ್ಯಮಂತ್ರಿಯವರು ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಬೀದರ್ ಜಿಲ್ಲೆಗಳಲ್ಲಿ ಗ್ರಾಮ ವಾಸ್ತವ್ಯ ಮಾಡುತ್ತಿರುವ ಗ್ರಾಮಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು.

**ಉಲ್ಲೇಖ** : ಸರ್ಕಾರದ ಆದೇಶ ಸಂ: ಸಕಇ-24: ಎಸ್‌ಎಲ್‌ಪಿ-2019, ದಿ:15-06-2019.

******

**ಪ್ರಸ್ತಾವನೆ:**

ಮಾನ್ಯ ಮುಖ್ಯಮಂತ್ರಿಯವರು ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಬೀದರ್ ಜಿಲ್ಲೆಗಳಲ್ಲಿ ಗ್ರಾಮ ವಾಸ್ತವ್ಯ ಮಾಡುತ್ತಿರುವ ಗ್ರಾಮಗಳಲ್ಲಿ ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲು ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.

ರೂ.ಲಕ್ಷಗಳಲ್ಲಿ

| ಕ್ರ. ಸಂ | ಜಿಲ್ಲೆ | ತಾಲ್ಲೂಕು | ಗ್ರಾಮ | ಮಂಜೂರಾತಿ ಮೊತ್ತ |
|---|---|---|---|---|
| 1 | ಕಲಬುರಗಿ | ಅಫಜಲಪುರ | ಯರೂರು (ಬಿ) | 100.00 |
| 2 | ಯಾದಗಿರಿ | ಗುರುಮಿಠಕಲ್ | ಚಂದರ್ಕಿ | 100.00 |
| 3 | ರಾಯಚೂರು | ಮಾನ್ವಿ | ಕರೇಗುಡ್ಡ | 100.00 |
| 4 | ಬೀದರ್ | ಬಸವಕಲ್ಯಾಣ | ಉಜಳಾಂಬ | 100.00 |
| | ಒಟ್ಟು | | | 400.00 |

ಸದರಿ ಸರ್ಕಾರಿ ಆದೇಶದನ್ವಯ, ಮಾನ್ಯ ಮುಖ್ಯಮಂತ್ರಿಯವರು ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಬೀದರ್ ಜಿಲ್ಲೆಗಳಲ್ಲಿ ಗ್ರಾಮ ವಾಸ್ತವ್ಯ ಮಾಡುತ್ತಿರುವ ಗ್ರಾಮಗಳಲ್ಲಿ ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ರೂ.400.00 ಲಕ್ಷಗಳಿಗೆ ಮಂಜೂರಾತಿ ನೀಡಬೇಕಾಗಿರುವುದರಿಂದ ಈ ಕೆಳಕಂಡ ಆದೇಶ.

**ಸಂ: ಸಕನಿ: ಕಾಲೋನಿ: ಸಿಆರ್-5: 2018-19** **ದಿನಾಂಕ:17-06-2019**

**ಆ ದೇ ಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಅನುಸರಿಸಿ, ಮಾನ್ಯ ಮುಖ್ಯಮಂತ್ರಿಯವರು ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಬೀದರ್ ಜಿಲ್ಲೆಗಳಲ್ಲಿ ಗ್ರಾಮ ವಾಸ್ತವ್ಯ ಮಾಡುತ್ತಿರುವ ಗ್ರಾಮಗಳಲ್ಲಿ ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಈ ಕೆಳಕಂಡಂತೆ ಮಂಜೂರಾತಿ ನೀಡಿ ಆದೇಶಿಸಿದೆ.

Scanned with CamScanner

ರೂ.ಲಕ್ಷಗಳಲ್ಲಿ

| ಕ್ರ. ಸಂ | ಜಿಲ್ಲೆ | ತಾಲ್ಲೂಕು | ಗ್ರಾಮ | ಮಂಜೂರಾತಿ ಮೊತ್ತ |
|---|---|---|---|---|
| 1 | ಕಲಬುರಗಿ | ಅಫಜಲಪುರ | ಯರೂರು (ಬಿ) | 100.00 |
| 2 | ಯಾದಗಿರಿ | ಗುರುಮಿಠಕಲ್ | ಚಂದರ್ಕಿ | 100.00 |
| 3 | ರಾಯಚೂರು | ಮಾನ್ವಿ | ಕರೇಗುಡ್ಡ | 100.00 |
| 4 | ಬೀದರ್ | ಬಸವಕಲ್ಯಾಣ | ಉಜಳಾಂಬ | 100.00 |
| | ಒಟ್ಟು | | | 400.00 |

2019-20ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಬಂಡವಾಳ ಲೆಕ್ಕ ಶೀರ್ಷಿಕೆ 4225-01-796-0-01 ರಡಿ ಪ್ರಗತಿ ಕಾಲೋನಿ ಯೋಜನೆಯ ಅನುಷ್ಠಾನ ಸಂಬಂಧವಾಗಿ ಒದಗಿಸಿಕೊಳ್ಳಲಾಗುವ ಅನುದಾನದಲ್ಲಿ ಮೇಲ್ಕಂಡಂತೆ ಮಂಜೂರಾತಿ ನೀಡಲಾಗಿರುವ ರೂ.400.00 ಲಕ್ಷಗಳನ್ನು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗುವುದು.

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
17/6/19

**ಪ್ರತಿಯನ್ನು ಕೆಳಕಂಡವರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ ರವಾನಿಸಿದೆ:-**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಬೀದರ್ ಜಿಲ್ಲೆಗಳು.
4. ಮುಖ್ಯ ಲೆಕ್ಕಾಧಿಕಾರಿಗಳು, ಲೆಕ್ಕ ಶಾಖೆ, ಆಯುಕ್ತರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಬೀದರ್ ಜಿಲ್ಲೆಗಳು.
6. ಸಂಬಂಧಪಟ್ಟ ತಾಲ್ಲೂಕುಗಳಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರುಗಳಿಗೆ ಸಂಬಂಧಪಟ್ಟ ಜಿಲ್ಲೆಗಳಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಜಂಟಿ/ ಉಪ ನಿರ್ದೇಶಕರು ರವರ ಮುಖಾಂತರ ರವಾನಿಸಿದೆ.
7. ಕಛೇರಿ ಪ್ರತಿ: ಇತರೆ.

Scanned with CamScanner